All India Radio: Bangalore
National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

18.11.2025 19.35 P.M.

***************

ಮುಖ್ಯಾಂಶಗಳು

- ಶುದ್ಧ ಕುಡಿಯುವ ನೀರು ಸಂರಕ್ಷಿಸಿ ಮುಂದಿನ ಪೀಳಿಗೆಗೆ ನೀಡುವುದು ಪ್ರತಿಯೊಬ್ಬರ ಜವಾಬ್ದಾರಿ - ರಾಷ್ಟ್ರಪತಿ ದ್ರೌಪದಿ ಮುರ್ಮು
- ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್ ಕುರಿತ ೬ನೇ ಪೂರ್ವಭಾವಿ ಸಭೆ ನಡೆಸಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್
- ನೈಸರ್ಗಿಕ ವಿಕೋಪ, ಕೀಟಬಾಧೆಯಿಂದಾಗುವ ಬೆಳೆ ನಷ್ಟಕ್ಕೆ ಆರ್ಥಿಕ ನೆರವು ನೀಡಲು ಕ್ರಮ - ಸಚಿವ ಶಿವರಾಜ್ ಸಿಂಗ್ ಚೌಹಾಣ್
- ದೇಶದ ವ್ಯಾಪಾರ ಮತ್ತು ಸರಕು ಸೇವೆಗಳ ರಫ್ತು ಚಟುವಟಿಕೆಯಲ್ಲಿ ಶೇಕಡ ೪.೮ ರಷ್ಟು ಪ್ರಗತಿ
- ರಣಜಿ ಕ್ರಿಕೆಟ್; ಚಂಡಗಢದ ವಿರುದ್ಧ ಕರ್ನಾಟಕಕ್ಕೆ ಗೆಲುವು, ಕ್ವಾಟರ್ ಫೈನಲ್ ಪ್ರವೇಶಿಸುವ ಕನಸು ಜೀವಂತ

***************

ಶುದ್ಧ ಕುಡಿಯುವ ನೀರಿನ ಲಭ್ಯತೆ ಇಂದಿನ ದಿನಗಳಲ್ಲಿ ಸವಾಲಾಗಿದ್ದು, ಅದನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸುವುದು ಸರ್ಕಾರ ಮತ್ತು ಜನತೆಯ ಕರ್ತವ್ಯವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

ದೆಹಲಿಯ ವಿಜ್ಞಾನ ಭವನದಲ್ಲಿಂದು ನಡೆದ ರಾಷ್ಟ್ರೀಯ ಜಲ ಪುರಸ್ಕಾರ ೨೦೨೪ ಪ್ರದಾನ ಮಾಡಿ ಮಾತನಾಡಿದ ರಾಷ್ಟ್ರಪತಿಗಳು, ಇಂದು ಕುಡಿಯುವ ನೀರಿನ ಲಭ್ಯತೆಯಲ್ಲಿ ಕೇವಲ ಶೇಕಡ ೧ರಷ್ಟು ಮಾತ್ರ ಮಾನವ ಬಳಕೆಗೆ ಯೋಗ್ಯವಾಗಿದೆ. ಆದ್ದರಿಂದ ನೀರಿನ ಸಂರಕ್ಷಣೆ ಅತಿ ಮುಖ್ಯವಾಗಿದೆ ಎಂದರು.

ಕೇಂದ್ರ ಸರ್ಕಾರದಿಂದ ಆರಂಭಿಸಲಾಗಿರುವ "ಜಲ ಸಂಚಯ್ ಜನ್ ಭಾಗಿದಾರಿ" ಯೋಜನೆಯಿಂದ ನೀರಿನ ಸಂಗ್ರಹ ಉತ್ತಮವಾಗಿ ಏರಿಕೆಯಾಗುತ್ತಿದೆ. ಸಮುದಾಯದ ಸಹಭಾಗಿತ್ವದೊಂದಿಗೆ ನೀರನ್ನು ಸಂಗ್ರಹಿಸುವ ಮತ್ತು ಭೂಗರ್ಭಜಲವನ್ನು ಹೆಚ್ಚಿಸುವ ಮಹತ್ವಾಕಾಂಕ್ಷೆಯ ಯೋಜನೆ

ಇದಾಗಿದ್ದು, ೩೫ ಲಕ್ಷ ಲೀಟರ್ ಅಂತರ್‌ಜಲ ಸಂಗ್ರಹ ಯೋಗ್ಯವಾದ ಮರುಪೂರಣ ಘಟಕ ಸ್ಥಾಪನೆಯಾಗಿರುವುದು ಶ್ಲಾಘನೀಯ ಕಾರ್ಯ ಎಂದರು.

ಕೇಂದ್ರ ಸರ್ಕಾರ ರೂಪಿಸಿರುವ ಜಲ ಜೀವನ್ ಮಿಷನ್ ಯೋಜನೆಯು ಕುಡಿಯುವ ನೀರಿನ ಭದ್ರತೆಯನ್ನು ಖಾತ್ರಿಪಡಿಸುತ್ತಿದೆ. ಪ್ರತಿ ಗ್ರಾಮೀಣ ಮನೆಗೆ ನಲ್ಲಿ ನೀರಿನ ಸಂಪರ್ಕ ಒದಗಿಸುವ ಗುರಿಯನ್ನು ಇದು ಹೊಂದಿದ್ದು, ಇದಾಗಲೇ ಬಹುತೇಕ ಯೋಜನೆ ಯಶಸ್ವಿಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ಇದು ಗ್ರಾಮೀಣ ಪ್ರದೇಶದಲ್ಲಿ ಸಾರ್ವಜನಿಕ ಆರೋಗ್ಯ ಮತ್ತು ಮಹಿಳೆಯರ ಮೇಲೆ ಉಂಟಾಗುವ ಆರ್ಥಿಕ ಹೊರೆಯನ್ನು ಕಡಿಮೆ ಮಾಡುತ್ತಿದೆ ಎಂದರು.

***************

ಪ್ರಧಾನಿ ನರೇಂದ್ರ ಮೋದಿ ನಾಳೆ ಆಂಧ್ರಪ್ರದೇಶ ಮತ್ತು ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ಮೊದಲಿಗೆ ಆಂಧ್ರಪ್ರದೇಶದ ಪುಟ್ಟಪರ್ತಿಯಲ್ಲಿರುವ ಭಗವಾನ್ ಶ್ರೀ ಸತ್ಯ ಸಾಯಿ ಬಾಬಾ ಅವರ ಪವಿತ್ರ ದೇವಾಲಯ ಮತ್ತು ಮಹಾಸಮಾಧಿ ಸ್ಥಳಕ್ಕೆ ತೆರಳಿ ನಮನ ಸಲ್ಲಿಸಲಿದ್ದಾರೆ.

ನಂತರ ಅವರು ಸತ್ಯಸಾಯಿ ಬಾಬಾ ಅವರ ಶತಮಾನೋತ್ಸವ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಅವರನ್ನು ಗೌರವಿಸುವ ಸ್ಮರಣಾರ್ಥ ನಾಣ್ಯ ಮತ್ತು ಅಂಚೆಚೀಟಿಗಳನ್ನು ಬಿಡುಗಡೆ ಮಾಡಲಿದ್ದಾರೆ.

ನಂತರ ಪ್ರಧಾನಿ, ತಮಿಳುನಾಡಿನ ಕೊಯಮತ್ತೂರಿಗೆ ಪ್ರಯಾಣಿಸಲಿದ್ದಾರೆ. ಅಲ್ಲಿ ಅವರು ದಕ್ಷಿಣ ಭಾರತ ನೈಸರ್ಗಿಕ ಕೃಷಿ ಶೃಂಗಸಭೆಯನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಪ್ರಧಾನಿ, ೧೮ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೊತ್ತದ ಪಿಎಂ-ಕಿಸಾನ್ ನ ೨೧ನೇ ಕಂತನ್ನು ರೈತ ಫಲಾನುಭವಿಗಳಿಗೆ ಬಿಡುಗಡೆ ಮಾಡಲಿದ್ದಾರೆ.

***************

ದೆಹಲಿಯಲ್ಲಿ ಇಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಅಧ್ಯಕ್ಷತೆಯಲ್ಲಿ ಆರನೇ ಬಜೆಟ್ ಪೂರ್ವ ಸಮಾಲೋಚನೆ ನಡೆಯಿತು.

೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್‌ಗೆ ಸಂಬಂಧಿಸಿದಂತೆ ಬಂಡವಾಳ ಮಾರುಕಟ್ಟೆಗಳ ಪಾಲುದಾರರೊಂದಿಗೆ ನಡೆದ ಈ ಸಭೆಯಲ್ಲಿ ಕೇಂದ್ರ ಹಣಕಾಸು ರಾಜ್ಯ ಸಚಿವ ಪಂಕಜ್ ಚೌಧರಿ, ಆರ್ಥಿಕ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿ ಮತ್ತು ಭಾರತ ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರರೂ ಭಾಗವಹಿಸಿದ್ದರು.

ವಿತ್ತ ಸಚಿವಾಲಯವು ತಜ್ಞರು, ಉದ್ಯಮ ಮುಖಂಡರು, ಅರ್ಥಶಾಸ್ತ್ರಜ್ಞರು ಮತ್ತು ರಾಜ್ಯ ಅಧಿಕಾರಿಗಳೊಂದಿಗೆ ವಾರ್ಷಿಕವಾಗಿ ಹಲವಾರು ಬಜೆಟ್ ಪೂರ್ವ ಸಮಾಲೋಚನಾ ಸಭೆಗಳನ್ನು

ನಡೆಸುತ್ತದೆ. ಇದಾಗಲೇ ವಿವಿಧ ಕ್ಷೇತ್ರಗಳ ತಜ್ಞರ ಜೊತೆ ಮೂರು ಸಮಾಲೋಚನೆಗಳು ನಡೆದಿವೆ.

***************

ದೇಶದಲ್ಲಿ ಕಳೆದ ಏಪ್ರಿಲ್ ನಿಂದ ಈ ವರ್ಷದ ಅಕ್ಟೋಬರ್ ವರೆಗೆ ವ್ಯಾಪಾರ ವಹಿವಾಟು ಮತ್ತು ಸರಕು ಸೇವೆಗಳ ಒಟ್ಟಾರೆ ರಫ್ತು ಶೇಕಡ ೪.೮ ಕ್ಕಿಂತ ಹೆಚ್ಚು ಏರಿಕೆಯಾಗಿ ೪೯೧.೮ ಶತಕೋಟಿ ಡಾಲರ್‌ಗಳಿಗೆ ತಲುಪಿದೆ.

ಕಳೆದ ಹಣಕಾಸು ವರ್ಷದ ಇದೇ ಅವಧಿಗೆ ಹೋಲಿಸಿದರೆ, ಸರಕು ರಫ್ತು ಶೇಕಡ ೦.೬೨ ರಷ್ಟು ಅಭಿವೃದ್ಧಿಯಾಗಿದ್ದು, ಆಮದು ಶೇಕಡ ೬.೩೭ ರಷ್ಟು ಹೆಚ್ಚಾಗಿದೆ. ಈ ಒಟ್ಟಾರೆ ಬೆಳವಣಿಗೆಗೆ ಪ್ರಮುಖ ಕಾರಣವೆಂದರೆ ಪೆಟ್ರೋಲಿಯೇಂತರ ರಫ್ತುಗಳಲ್ಲಿ ಸ್ಥಿರವಾದ ಏರಿಕೆ ಎಂದು ವಾಣಿಜ್ಯ ಸಚಿವಾಲಯ ಹೇಳಿದೆ.

೨೦೨೫ರ ಮೊದಲ ಏಳು ತಿಂಗಳಲ್ಲಿ, ಪೆಟ್ರೋಲಿಯೇಂತರ ರಫ್ತುಗಳು ೨೧೯.೯ ಶತಕೋಟಿ ಡಾಲರ್‌ಗಳಾಗಿದ್ದು, ಶೇಕಡಾ ३.೯೨ ರಷ್ಟು ಹೆಚ್ಚಳ ದಾಖಲಿಸಿವೆ. ಅದೇ ಅವಧಿಯಲ್ಲಿ ಒಟ್ಟು ಆಮದುಗಳು ೫೬೯.೯೫ ಶತಕೋಟಿ ಡಾಲರ್‌ಗಳೆಂದು ಅಂದಾಜಿಸಲಾಗಿದೆ.

***************

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕಳೆದ ೧೧ ವರ್ಷಗಳಲ್ಲಿ, ಕೃಷಿ ಕ್ಷೇತ್ರದಲ್ಲಿ ಅಗಾಧ ಪ್ರಗತಿಯಾಗಿದೆ. ಕೃಷಿಕರನ್ನು ಗಮನದಲ್ಲಿಟ್ಟುಕೊಂಡು ಹಲವು ಯೋಜನೆಗಳನ್ನು ರೂಪಿಸಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಹೇಳಿದರು.

ದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿ, ಪಿಎಂ ಕಿಸಾನ್ ಸಮ್ಮಾನ ನಿಧಿಯ ಅಡಿಯಲ್ಲಿ ೧೦ ಕೋಟಿಗೂ ರೈತರು ಪ್ರಯೋಜನ ಪಡೆಯುತ್ತಿದ್ದಾರೆ. ಕೇಂದ್ರ ಸರ್ಕಾರವು ವಾರ್ಷಿಕವಾಗಿ ೨ ಲಕ್ಷ ಕೋಟಿ ರೂಪಾಯಿ ರಸಗೊಬ್ಬರ ಸಬ್ಸಿಡಿ ಒದಗಿಸುತ್ತಿದೆ ಎಂದು ಹೇಳಿದರು.

ಕಳೆದ ೧೦ ವರ್ಷಗಳಲ್ಲಿ, ಬೆಳೆ ಉತ್ಪಾದನೆಯು ೨೪೬.೪೨ ದಶಲಕ್ಷ ಟನ್‌ಗಳಿಂದ ३೫३.೯೬ ದಶಲಕ್ಷ ಟನ್‌ಗಳಿಗೆ ಹೆಚ್ಚಾಗಿದೆ. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ರೈತರಲ್ಲಿ ಹೊಸ ಹುಮ್ಮಸ್ಸನ್ನು ಮೂಡಿಸಿದೆ. ಇದು ನೈಸರ್ಗಿಕ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ರೈತರಿಗೆ ಉಂಟಾಗುವ ಬೆಳೆ ನಷ್ಟಕ್ಕೆ ಆರ್ಥಿಕ ನೆರವು ನೀಡುವ ಉದ್ದೇಶ ಹೊಂದಿದೆ. ಇದರ ಅಡಿ ಇದಾಗಲೇ ಲಕ್ಷಾಂತರ ರೈತರು ಪ್ರಯೋಜನ ಪಡೆದುಕೊಂಡಿದ್ದಾರೆ ಎಂದರು.

***************

ಇದೇ ೨೦ರಿಂದ ೨೮ರವರೆಗೆ ಗೋವಾದಲ್ಲಿ ೫೬ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನಡೆಯಲಿದೆ.

ಚಿತ್ರೋತ್ಸವದಲ್ಲಿ ೮೧ ದೇಶಗಳ ೨೪೦ ಚಲನಚಿತ್ರಗಳು ಪ್ರದರ್ಶನಗೊಳ್ಳಲಿದ್ದು, ಇದು ವಿಭಿನ್ನ ದೇಶಗಳ ನಡುವೆ ಸಾಂಸ್ಕೃತಿಕ ಸೇತುವೆಯಾಗಿ ಕಾರ್ಯ ನಿರ್ವಹಿಸುತ್ತಿರುವ ಜೊತೆಗೆ ಭಾರತೀಯ ಸಿನಿಮಾಕ್ಕೆ ಜಾಗತಿಕ ವೇದಿಕೆಯನ್ನು ಒದಗಿಸುತ್ತದೆ. ಕೃತಕ ಬುದ್ಧಿಮತ್ತೆ ಆಧರಿತ ವಿಷಯಕ್ಕಾಗಿ ಮೀಸಲಾದ ವಿಭಾಗದೊಂದಿಗೆ ಇಫಿ ಹೊಸ ತಂತ್ರಜ್ಞಾನಗಳನ್ನು ಸಹ ಸಂಯೋಜಿಸುತ್ತದೆ.

ಜಾಗತಿಕ ಚಲನಚಿತ್ರ ನಿರ್ಮಾಪಕರಿಗೆ ತಮ್ಮ ಚಲನಚಿತ್ರಗಳನ್ನು ಭಾರತ ಮಾತ್ರವಲ್ಲದೆ, ಪ್ರಪಂಚದಾದ್ಯಂತದ ಸಿನಿಪ್ರಿಯರಿಗೆ ಪ್ರದರ್ಶಿಸಲು ಅವಕಾಶಗಳನ್ನು ಕಲ್ಪಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರ ನಾರಿ ಶಕ್ತಿ ಆಶಯಕ್ಕೆ ಅನುಗುಣವಾಗಿ, ಈ ವರ್ಷ ಮಹಿಳೆಯರು ನಿರ್ದೇಶಿಸಿದ ೫೦ಕ್ಕೂ ಹೆಚ್ಚು ಚಲನಚಿತ್ರಗಳನ್ನು ಪ್ರದರ್ಶಿಸಲಾಗುವುದು.

ಸ್ವಾತಂತ್ರ್ಯದ ೭೫ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಕಳೆದ ವರ್ಷ ೭೫ ಯುವ ಮನಸ್ಸುಗಳಿಗೆ ಈ ಉತ್ಸವದಲ್ಲಿ ವೇದಿಕೆ ಕಲ್ಪಿಸಲಾಗಿತ್ತು. ಈಗ ಅದರ ಸಂಖ್ಯೆಯನ್ನು ೧೨೦ಕ್ಕೆ ಏರಿಸಲಾಗಿದೆ.

***************

ಎರಡನೇ ಹಂತದಲ್ಲಿ ವಿಶೇಷ ಮತಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ೫೦ ಕೋಟಿ ೯೭ ಲಕ್ಷ ನಮೂನೆಗಳನ್ನು ಮತದಾರರಿಗೆ ವಿತರಿಸಲಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ.

ಈ ಹಂತದಲ್ಲಿ ೫೧ ಕೋಟಿ ಮತದಾರರನ್ನು ತಲುಪುವ ಗುರಿ ಇದ್ದು, ಈ ಪೈಕಿ ಶೇಕಡ ೯೮.೫೪ರಷ್ಟು ಪ್ರಗತಿ ಸಾಧಿಸಲಾಗಿದೆ. ಈ ತಿಂಗಳ ೪ ರಿಂದ ಎರಡನೇ ಹಂತದ ಮತದಾರರ ಪಟ್ಟಿ ಪರಿಷ್ಕರಣೆ ೯ ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಯುತ್ತಿದೆ.

***************

ದೆಹಲಿಯ ಕೆಂಪುಕೋಟೆ ಬಳಿಯ ಕಾರ್ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇಂದು ಫರಿದಾಬಾದ್ ನ ಅಲ್ ಫಲಾಹ್ ವಿಶ್ವವಿದ್ಯಾಲಯದ ಕಚೇರಿ ಸೇರಿದಂತೆ ೨೫ ಸ್ಥಳಗಳಲ್ಲಿ ಶೋಧ ಕಾರ್ಯ ನಡೆಸುತ್ತಿದ್ದಾರೆ.

ಇದೇ ೧೦ರಂದು ನಡೆದ ಸ್ಫೋಟದಲ್ಲಿ ಈ ವಿಶ್ವವಿದ್ಯಾಲಯದ ಪಾತ್ರ ಇರುವುದು ಬೆಳಕಿಗೆ ಬಂದಿತ್ತು. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಅಲ್ ಫಲಾಹ್ ವಿಶ್ವವಿದ್ಯಾಲಯದ ಖಾತೆಗಳ ಹಣಕಾಸು ಕುರಿತು ತನಿಖೆಗೆ ಆದೇಶಿಸಿತ್ತು. ಜೊತೆಗೆ ಆರ್ಥಿಕ ಅಪರಾಧಗಳ ವಿಭಾಗಕ್ಕೆ ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯನ್ನೂ ಪರಿಶೀಲಿಸುವಂತೆ ಸೂಚನೆ ನೀಡಿತ್ತು.

***************

ತಂತ್ರಜ್ಞಾನ ಮತ್ತು ನಾವೀನ್ಯತೆಯಲ್ಲಿ ಭಾರತ ನಾಯಕತ್ವದ ಪ್ರಮುಖ ಪಾತ್ರವನ್ನು ವಹಿಸಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ದೆಹಲಿಯಲ್ಲಿಂದು ಹೇಳಿದ್ದಾರೆ.

ಈ।ಅಅ। ಯ ೯೮ ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಸಚಿವರು, ೨೦೪೭ ರ ವೇಳೆಗೆ ವಿಕಸಿತ ಭಾರತದ ಗುರಿಯನ್ನು ಸಾಧಿಸಲು ಸರ್ಕಾರವು ನಾವೀನ್ಯತೆಗೆ ಆದ್ಯತೆ ನೀಡುತ್ತಿದೆ. ಸಮೃದ್ಧ ಮತ್ತು ಅಭಿವೃದ್ಧಿ ಹೊಂದಿದ ದೇಶವನ್ನು ನಿರ್ಮಿಸಲು ಸಾಮೂಹಿಕ ಪ್ರಯತ್ನ ಅಗತ್ಯವಿದೆ. ಸರಿಯಾದ ಕೌಶಲ್ಯಗಳೊಂದಿಗೆ ಕಾರ್ಯಪಡೆಯನ್ನು ಸಜ್ಜುಗೊಳಿಸುವುದು ಈ ದೃಷ್ಟಿಕೋನಕ್ಕೆ ನಿರ್ಣಾಯಕವಾಗಿದೆ ಎಂದರು.

***************

ಹುಬ್ಬಳ್ಳಿಯಲ್ಲಿ ನಡಯುತ್ತಿರುವ ರಣಜಿ ಕ್ರಿಕೆಟ್‌ನಲ್ಲಿ ಕರ್ನಾಟಕ ಚಂಡಿಗಡ ವಿರುದ್ಧ ಗೆಲುವು ಸಾಧಿಸಿ ಬೋನಸ್ ಅಂಕ ಪಡೆದುಕೊಂಡಿದೆ. ಶ್ರೇಯಸ್ ಗೋಪಾಲ್, ಶಿಖಾಹರ್ ಶೆಟ್ಟಿ ಜೋಡಿಯ ಮಾರಕ ದಾಳಿಗೆ ಚಂಡಿಗಡ ಅಲೌಟ್ ಆಯಿತು.

ಶ್ರೇಯಸ್ ಗೋಪಾಲ್ ಪಂದ್ಯದಲ್ಲಿ ೧೦ ವಿಕೆಟ್‌ಗಳನ್ನು ಪಡೆದು ಈ ಋತುವಿನಲ್ಲಿ ಎರಡನೇ ಬಾರಿಗೆ ೧೦ ವಿಕೆಟ್‌ಗಳನ್ನು ಉರುಳಿಸಿದ ಕೀರ್ತಿಗೆ ಪಾತ್ರರಾದರು.

ಈ ಗೆಲುವಿನ ನಂತರ ಕರ್ನಾಟಕಕ್ಕೆ ಕ್ವಾಟರ್ ಫೈನಲ್ಸ್ ಪ್ರವೇಶಿಸುವ ಕನಸು ಇನ್ನು ಜೀವಂತವಾಗಿದೆ.

******* ಮುಕ್ತಾಯ *******